ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಕರಾವಳಿ ಅಭಿವೃದ್ಧಿ ಪ್ರಾಧಿಕಾರದ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

1295 (1441) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2019-20ನೇ ಸಾಲಿನಲ್ಲಿ ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಆ) 2018-19, 2019-20ರಲ್ಲಿ ಎಷ್ಟು ಹೊಸ ಕಾಮಗಾರಿಗಳನ್ನು ಪ್ರಾಧಿಕಾರದಿಂದ ತೆಗೆದುಕೊಳ್ಳಲಾಗಿದೆ ; ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ; ಬಾಕಿ ಇರುವ ಕಾಮಗಾರಿಗಳು ಎಷ್ಟು ; (ವಿವರಗಳನ್ನು ಒದಗಿಸುವುದು)

(ಇ) ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಪೂರ್ಣಕಾಲಿಕ ಕಾರ್ಯದರ್ಶಿಗಳು ಇಲ್ಲದೇ ಕಾಮಗಾರಿಗಳು ವಿಳಂಬಗೊಳ್ಳುತ್ತಿರುವುದು ಪ್ರಾಧಿಕಾರಕ್ಕೆ ಹೊರೆಯಾಗುತ್ತಿರುವುದರ ಬಗ್ಗೆ ಸರ್ಕಾರದ ಗಮನದಲ್ಲಿದೆಯೇ ; ಪ್ರಾರಂಭದಿಂದ ಈವರೆಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ಪೂರ್ಣ ವಿವರ ನೀಡುವುದು)

(ಈ) ಪ್ರಾಧಿಕಾರದ ಮೂಲ ಉದ್ದೇಶವನ್ನು ಈಡೇರಿಸದೇ ಪ್ರಾಧಿಕಾರವನ್ನು ಸ್ಥಗಿತಗೊಳಿಸುವುದರ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ ?